ತೆಗೆದುಕೊಳ್ಳಿ. ಅಜೆಂಡಾದಲ್ಲಿರುವ ಒಂದಾದರೆ ಚರ್ಚೆಯ ವಿಷಯ ಬೇರೆ ತೆಗೆದುಕೊಳ್ಳುವುದು ಸರಿಯಾಗುವುದಿಲ್ಲ.

3. ಸಭೆಯ ಮುಂದಿಡಲಾದ ಕಾಗದಪತ್ರಗಳು

ಶ್ರೀ ಎಸ್.ಬಿ.ಪಾಟೀಲ್: ಅಪರಕಾರ್ಯದರ್ಶಿಗಳು: ಕರ್ನಾಟಕ ವಿಧಾನಸಭೆ: ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತವಾದ ಆದರೆ ವಿಧಾನ ಪರಿಷತ್ತಿನ ಸಹಮತಿ ದೊರೆಯದೇ ಹಿಂದಿರುಗಿಸಲಾದ 2005ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುತ್ತೇನೆ. (ಅನುಬಂಧ–1)

ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು)

I. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ) ಅವರು ಪರವಾಗಿ ಮಾನ್ಯ ಅಧ್ಯಕ್ಷರೆ, ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಮೇರೆಗೆ :

1. ನ್ಯಾಯಮೂರ್ತಿ ಎ.ಜೆ. ಸದಾಶಿವ ವಿಚಾರಣಾ ಆಯೋಗ (ಸೂರತ್ಕಲ್ ಗಲಭೆ) ಬೆಂಗಳೂರು ವರದಿ. (ಸಂಪುಟ 1 ಮತ್ತು 2ನ್ನು ಒಳಗೊಂಡಿದೆ)

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ :

1. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

II ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು) ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿ) ಅವರ ಪರವಾಗಿ :– ಮಾನ್ಯ ಅಧ್ಯಕ್ಷರೆ, 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ.

2. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.